ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

2

ಶಾಖೆ / ವಿಷಯ : DEPARTMENT / SUBJECT: ಸಂಸ್ಕೃತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 17/1/2021

ಜನರಲ್ ತಿಮ್ಮಯ್ಯ ಸ್ಮಾರಕ ಭವನ ಉದ್ಘಾಟನೆಗೆ ಸಜ್ಜು

ಫೆ.6ರಂದು ಮಡಿಕೇರಿಗೆ ರಾಷ್ಟ್ರಪತಿ

ವಿಶೇಷ ಸುದ್ದಿಲೋಕ ಮಡಿಕೇರಿ

ವೀರಸೇನಾನಿ ಜನರಲ್ ಕೆ.ಎಸ್.ತಿಮ್ಮಯ್ಯ ಹುಟ್ಟಿಬೆಳೆದ 'ಸನ್ನಿಸೈಡ್' ನಿವಾಸ ಜನರಲ್ ತಿಮ್ಮಯ್ಯ ಸ್ಮಾರಕ ಭವನ ಕಾಮಗಾರಿ ಪೂರ್ಣಗೊಂಡಿದ್ದು ಉದ್ಘಾಟನೆಗೆ ರಾಷ್ಟ್ರಪತಿ ರಾಮನಾಥ ಕೋವಿಂದ್ ಜಿಲ್ಲೆಗೆ ಆಗಮಿಸಲಿದ್ದಾರೆ.



ಜನರಲ್ ತಿಮ್ಮಯ್ಯ ಸ್ಮಾರಕ ಭವನ.

''ರಾಷ್ಟ್ರಪತಿ ಭವನದಿಂದ ಈ ಬಗ್ಗೆ ಅಧಿಕೃತ ಮಾಹಿತಿ ಮೊನ್ನೆತಿಮ್ಮಿ ಫೆ.6ರಂದು ಮಧ್ಯಾಹ್ನ 3.15ರಿಂದ 4 ಗಂಟೆವರೆಗೆ ಕಾರ್ಯಕ್ರಮಕ್ಕೆ ಸಮಯ ನಿಗದಿಯಾಗಿದೆ. 45 ನಿಮಿಷಗಳ ಕಾಲ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು ಜಿಲ್ಲಾಡಳಿತ ಹಾಗೂ ಘೋರಂನ ಪದಾಧಿಕಾರಿಗಳೊಂದಿಗೆ ಈ ಬಗ್ಗೆ ಸಭೆ ನಡೆಸಿ, ಕಾರ್ಯಕ್ರಮದ ರೂಪರೇಷೆ ತಯಾರಿಸಿ ರಾಷ್ಟ್ರಪತಿ ಭವನಕ್ಕೆ ಕಳುಹಿಸಲಿದ್ದೇವೆ,'' ಎಂದು ಫೀಲ್ಡ್ ಮಾರ್ಷಲ್ ಕೆ.ಎಂ ಕಾರ್ಯಪ್ಪ ಮತ್ತು ಜನರಲ್ ತಿಮ್ಮಯ್ಯ ಘೋರಂ ಅಧ್ಯಕ್ಷ ನಿವೃತ್ತ ಕರ್ನಲ್ ಕಂಡ್ರತಂಡ ಸುಬ್ಬಯ್ಯ ಮಾಹಿತಿ ನೀಡಿದರು.

''ಘೋರಂನ ಮನವಿಗೆ ಸ್ಪಂದಿಸಿ ಕಾರ್ಯಕ್ರಮಕ್ಕೆ ಬರಲು ರಾಷ್ಟ್ರಪತಿ ಒಪ್ಪಿದ್ದಾರೆ. ಸೇನಾ ಮುಖ್ಯಸ್ಥರು ಅಥವಾ ಸೇನೆಯ ಉನ್ನತಾಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ,'' ಎಂದರು. 2006ರಲ್ಲಿ ಅಂದಿನ ರಾಷ್ಟ್ರಪತಿ ಎ.ಪಿ.ಜೆ. ಅಬ್ದುಲ್ ಕಲಾಂ ಜನರಲ್ ತಿಮ್ಮಯ್ಯ ಅವರ 100ನೇ ಹುಟ್ಟು ಹಬ್ಬಕ್ಕೆ ಜಿಲ್ಲೆಗೆ ಆಗಮಿಸಿದ್ದರು. ಇದಾದ ಬಳಿಕ ಈಗ ರಾಮನಾಥ ಕೋವಿಂದ್ ಜಿಲ್ಲೆಗೆ ಆಗಮಿಸುತ್ತಿದ್ದಾರೆ.